**ಹೆಚ್ಚುವರಿ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ**

**ಸಿ.ಸಿ. ನಂ. 742/2022**

| | | | |
|---|---|---|---|
| **ಹೆಸರು** | : | **ರೇವಣಯ್ಯ** | **ಚಾ.ಸಾ. 13** |
| **ತಂದೆಯ ಹೆಸರು** | : | **ಮುರ್ಗಯ್ಯ ಸ್ವಾಮಿ** | **ಪ್ರಾ.ಸಾ. 11** |
| **ವಯಸ್ಸು** | : | **63 ವರ್ಷ** | **ದಿನಾಂಕಃ 01-07-2025** |
| **ಉದ್ಯೋಗ** | : | **ನಿವೃತ್ತ ASI** | |
| **ವಾಸಸ್ಥಳ** | : | **ಹರಸೂರ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

2022 ರಲ್ಲಿ ರಟಕಲ ಪೋಲಿಸ ಠಾಣೆಯಲ್ಲಿ ಎ.ಎಸ್.ಐ ಆಗಿ ಕಾರ್ಯನಿರ್ವಹಿಸಿದ್ದೇನೆ.

ದಿನಾಂಕಃ 08-02-2022 ರಂದು ಪ್ರಾಸಾ-10 ರವರಿಂದ ಕಡತ ಪಡೆದು ಚಾಸಾ-2 ರಿಂದ 7 ರವರ ಹೇಳಿಕೆಗಳನ್ನು ಪಡೆದಿದ್ದೇನೆ. ದಿನಾಂಕ 18-04-2022 ರಂದು ಚಾಸಾ-1ರವರ ಗಾಯದ ಪ್ರಮಾಣ ಪತ್ರ ಪಡೆದಿದ್ದೇನೆ. ಸದರಿ ಗಾಯದ ಪ್ರಮಾಣ ಪತ್ರವನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-10 ಎಂದು ಮತ್ತು ಅದರಲ್ಲಿರುವ ನನ್ನ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು. ಅದೇ ದಿನದಂದು FSL ವರದಿಯನ್ನು ಪಡೆದಿದ್ದೇನೆ. ಸದರಿ FSL ವರದಿಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-11 ಎಂದು ಮತ್ತು ಅದರಲ್ಲಿರುವ ನನ್ನ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಯಿತು. ದಿನಾಂಕ 18-04-2022 ರಂದು ತನಿಖೆ ಪೂರ್ಣಗೊಳಿಸಿ ಮಾನ್ಯ ನ್ಯಾಯಾಲಯಕ್ಕೆ ಅಂತಿಮ ವರದಿಯನ್ನು ಸಲ್ಲಿಸಿದ್ದೇನೆ.

**ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ SBK ವಕೀಲರಿಂದಃ**

ಚಂದನಕೇರದಲ್ಲಿ ಚಾಸಾ-1ರವರಿಗೆ ಸೇರಿದ ಒಂದು ಅಂಗಡಿ ಇದೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಸದರಿ ಅಂಗಡಿಯನ್ನು ಚಾಸಾ-1ರವರು ಆತನ ಹೆಂಡತಿ ನಡೆಸುತ್ತಾರೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಈ ರೀತಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರಕರಣ ದಾಖಲಿಸುವ ಸಮಯಕ್ಕೆ ಚಾಸಾ-1 ಮತ್ತು ಅವರ ಹೆಂಡತಿ ಒಂದೇ ಮನೆಯಲ್ಲಿ ವಾಸವಿದ್ದರು ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಈಗಲೂ ಸಹ ಚಾಸಾ-1 ಮತ್ತು ಚಾಸಾ-2ರವರು ಒಂದೇ ಮನೆಯಲ್ಲಿ ವಾಸವಿದ್ದಾರೆ ಎಂದರೆ ಸಾಕ್ಷಿ ಇರಬಹುದು ಮತ್ತು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಪ್ರಾಸಾ-1ರವರಿಗೆ ಸೇರಿದ ಒಂದು ಜೀಪ್ ಇದೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ದೂರಿನಲ್ಲಿ ಉಲ್ಲೇಖಿಸಿದ ಕ್ರೂಸರಿನ ಸಂಖ್ಯೆ ಮತ್ತು ಅದರ ಮಾಲೀಕರ ಬಗ್ಗೆ ನಾನು ತನಿಖೆ ಮಾಡಿಲ್ಲ. ಈ ಪ್ರಕರಣದಲ್ಲಿ ನಾನು ಸದರಿ ಕ್ರೂಸರನ್ನು ಜಪ್ತಿ ಮಾಡಿಲ್ಲ.

ನಾನು ಯಾವುದೇ ತನಿಖೆ ಮಾಡದೇ ಚಾಸಾ-1ರವರಿಗೆ ಅನುಕೂಲವಾಗಲು ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆ ಪಡೆದ ಬಗ್ಗೆ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಚಾಸಾ-1ರವರಿಗೆ ಅನುಕೂಲವಾಗಲು ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯವಿಚಾರಣೆಯಲ್ಲಿರುವ ಸಂಗತಿಗಳು ಸುಳ್ಳು ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲಾ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**
**ಓ.ಹೇ.ಕೇ. ಸರಿ ಇದೆ.**

**C/C ಹೆಚ್ಚುವರಿ ಪ್ರ.ದ.ನ್ಯಾ.ದಂ. ಚಿಂಚೋಳಿ.**